ಪ್ರ-72-(171)

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರ ನಿಯಮ–72 ಮತ್ತು ನಿಯಮ–330 ರಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನಾ ಪತ್ರಕ್ಕೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಹೇಳಿಕೆ.**

**ವಿಷಯ: ಕೊಪ್ಪಳ ಜಿಲ್ಲೆ, ಕುಕನೂರ ತಾಲ್ಲೂಕು ವ್ಯಾಪ್ತಿಯ ಮಸಬಹಂಚಿನಾಳ ಗ್ರಾಮ ಪಂಚಾಯತಿ ಸದಸ್ಯರ ಮೇಲೆ ಕ್ರಿಮಿನಲ್ ಪ್ರಕರಣ ದಾಖಲಾಗಿದ್ದರೂ, ಚುನಾವಣಾ ಆಯೋಗಕ್ಕೆ ಸುಳ್ಳು ಮಾಹಿತಿ ನೀಡಿ, ಕಳೆದ ಪಂಚಾಯತಿ ಚುನಾವಣೆಯಲ್ಲಿ ಸ್ಪರ್ಧಿಸಿರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಹೇಳಿಕೆ.**

**ಉತ್ತರ:** ಕೊಪ್ಪಳ ಜಿಲ್ಲೆ, ಕುಕನೂರ ತಾಲ್ಲೂಕು, ಮಸಬಹಂಚಿನಾಳ ಗ್ರಾಮ ಪಂಚಾಯತಿಗೆ ಡಿಸೆಂಬರ್ 2020 ರಲ್ಲಿ ನಡೆದ ಸಾರ್ವತ್ರಿಕ ಚುನಾವಣೆಯಲ್ಲಿ ಗಾವರಾಳ ಚುನಾವಣಾ ಕ್ಷೇತ್ರದಿಂದ ಸ್ಪರ್ಧಿಸಿ ಶ್ರೀ ಮಹೇಶ ತಂದೆ ಈರಪ್ಪ ಸಾಕೀನ ಗಾವರಾಳ ಇವರು ಆಯ್ಕೆಯಾಗಿರುತ್ತಾರೆ.

ಸದರಿಯವರ ವಿರುದ್ಧ ಕುಕನೂರು ಪೋಲೀಸ್ ಠಾಣೆಯಲ್ಲಿ ಗುನ್ನೆ ಸಂಖ್ಯೆ:48/2016 ರಲ್ಲಿ ಕಲಂ 341, 323, 324, 204, 206 ಮತ್ತು 34 ಇಂಡಿಯನ್ ಪೀನಲ್ ಕೋಡ್ (ಐ.ಪಿ.ಸಿ) ದನ್ವಯ ಪ್ರಕರಣ ದಾಖಲಾಗಿರುತ್ತದೆ ಮತ್ತು ಸದರಿ ಪ್ರಕರಣವು ಜಿಲ್ಲಾ ಸತ್ರ ನ್ಯಾಯಾಲಯ, ಕೊಪ್ಪಳರವರಲ್ಲಿ ಎಸ್.ಸಿ. ಸಂಖ್ಯೆ:59/2017 ರಲ್ಲಿ ವಿಚಾರಣೆಗೆ ಬಾಕಿಯಿರುತ್ತದೆ.

ಜಿಲ್ಲಾ ಸತ್ರ ನ್ಯಾಯಾಲಯ, ಕೊಪ್ಪಳ ರವರ ಆದೇಶದಂತೆ ಈ ಪ್ರಕರಣದಲ್ಲಿ ಮುಂದಿನ ಕ್ರಮ ವಹಿಸಲಾಗುವುದು.

**(ಕೆ.ಎಸ್. ಈಶ್ವರಪ್ಪ)**
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

ಸಂಖ್ಯೆ: ಗ್ರಾಅಪ 168 ಗ್ರಾಪಂಅ 2021